## 2002ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 6

# ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 2002

## ಪ್ರಕರಣಗಳ ಪಟ್ಟಿ

*ಪ್ರಕರಣಗಳು:*

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ

2. 46ನೇ ಪ್ರಕರಣದ ತಿದ್ದುಪಡಿ

## 2002ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 6

# ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 2002

*(ಭಾರತ ಗಣರಾಜ್ಯದ ಐವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯಪಾಲರಿಂದ ಪ್ರಖ್ಯಾಪಿತವಾಗಿದ್ದು, 2002ರ ಸೆಪ್ಟೆಂಬರ್ 6ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದಲ್ಲಿ ಮೊದಲು ಪ್ರಕಟವಾಗಿದೆ)*

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧ್ಯಾದೇಶ.

ಕರ್ನಾಟಕ ವಿಧಾನ ಪರಿಷತ್ತು ಅಧಿವೇಶನದಲ್ಲಿಲ್ಲದಿರುವುದರಿಂದ ಮತ್ತು ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ನ್ನು (1993ರ ಕರ್ನಾಟಕ ಅಧಿನಿಯಮ 14) ಮತ್ತಷ್ಟು ತಿದ್ದುಪಡಿ ಮಾಡಲು ಕೂಡಲೇ ಕ್ರಮ ಕೈಗೊಳ್ಳುವುದನ್ನು ಅವಶ್ಯಕಗೊಳಿಸುವಂಥ ಸನ್ನಿವೇಶಗಳು ಉಂಟಾಗಿವೆಯೆಂದು ಕರ್ನಾಟಕ ರಾಜ್ಯಪಾಲರಿಗೆ ಮನದಟ್ಟಾಗಿರುವುದರಿಂದ;

ಈಗ, ಕರ್ನಾಟಕ ರಾಜ್ಯಪಾಲರು ಭಾರತ ಸಂವಿಧಾನದ 213ನೇ ಅನುಚ್ಛೇದದ (1)ನೇ ಖಂಡದಿಂದ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಈ ಮುಂದಿನ ಅಧ್ಯಾದೇಶವನ್ನು ಪ್ರಖ್ಯಾಪಿಸಿದ್ದಾರೆ, ಎಂದರೆ:-

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧ್ಯಾದೇಶವನ್ನು ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 2002 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

2. **46ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ (1993ರ ಕರ್ನಾಟಕ ಅಧಿನಿಯಮ 14) 46ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು ಎಂದರೆ:-

"ಪರಂತು, ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 2002ರ ಪ್ರಾರಂಭದ ದಿನಾಂಕದಂದು ಹುದ್ದೆಯಲ್ಲಿರುವ ಗ್ರಾಮ ಪಂಚಾಯತಿಯ ಅಧ್ಯಕ್ಷ ಮತ್ತು

---

ಕರ್ನಾಟಕ ರಾಜ್ಯ ಪತ್ರದ ಭಾಗ-IVಎ ವಿಶೇಷ ಪತ್ರಿಕೆ ಸಂಖ್ಯೆ: 1285 ದಿನಾಂಕ: 6.9.2002 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 48 ಶಾಸನ 2002

ಉಪಾಧ್ಯಕ್ಷರ ಹುದ್ದೆಯ ಅವಧಿಯು ಅವರ ಚುನಾವಣೆಯ ದಿನಾಂಕದಿಂದ ಮೂವತ್ತಮೂರು ತಿಂಗಳುಗಳಾಗಿರತಕ್ಕದ್ದು ಮತ್ತು ಸದರಿ ಅವಧಿಯ ಮುಕ್ತಾಯದ ನಿಕಟಪೂರ್ವದಲ್ಲಿ ಚುನಾಯಿತರಾಗಬೇಕಾದ ಗ್ರಾಮ ಪಂಚಾಯತಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಯ ಅವಧಿಯು ಉಳಿದ ಇಪ್ಪತ್ತೇಳು ತಿಂಗಳುಗಳಾಗಿರತಕ್ಕದ್ದು, ಪರಂತು, ಈ ಎರಡೂ ಸಂದರ್ಭಗಳಲ್ಲಿ ಅವರು ಆ ಸಮಯದಲ್ಲಿ ಗ್ರಾಮ ಪಂಚಾಯತಿಯ ಸದಸ್ಯರಾಗಿರುವುದು ನಿಂತುಹೋಗಿರತಕ್ಕದ್ದಲ್ಲ."